ಬಿಡದಿಯ ಕೇತಗಾನಹಳ್ಳಿ ಜಮೀನನ್ನು 1984-85ರಲ್ಲಿ ಚೆನ್ನಾಂಬಿಕಾ ಫಿಲಂಸ್‌ನಿಂದ ಬಂದ ಹಣದಲ್ಲಿ ಕುಮಾರಸ್ವಾಮಿ ಅವರು ಖರೀದಿಸಿದ್ದರು. ಅಲ್ಲಿಂದ ಹಲ ವಾರು ಸರ್ಕಾರಗಳು ಬಂದುಹೋಗಿವೆ. ಆಗಿನಿಂದ ಕಾಣದ ಒತ್ತುವರಿ ಈಗ ಆಗಿದೆಯೇ. ನಾವೂ ಈ ವಿಚಾರವಾಗಿ ಕಾನೂನಾತ್ಮಕ ಹೋರಾಟ ನಡೆಸುತ್ತೇವೆ.

• **ನಿಖಿಲ್ ಕುಮಾರಸ್ವಾಮಿ** ಜೆಡಿಎಸ್ ನಾಯಕ

ಸುದ್ದಿ ಸಿಂಚನ

ಕಾಲೇಜಿನಲ್ಲಿ ನಿಂದನೆ ಸಹಿಸದೆ ವಿದ್ಯಾರ್ಥಿನಿ ಆತ್ಮಹತ್ಯೆ..!

ಮಂಡ್ಯ: ಹುಡುಗರಿಬ್ಬರು ನಿಂದಿಸಿದರೆಂಬ ಕಾರಣಕ್ಕೆ ಭಾರತೀ ಕಾಲೇಜಿನ ವಿದ್ಯಾರ್ಥಿನಿಯೊಬ್ಬಳು ವಿದ್ಯಾರ್ಥಿನಿಲಯದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಮದ್ದೂರು ತಾಲೂಕು ಕೆ.ಎಂ.ದೊಡ್ಡಿಯ ಭಾರತೀ ಕಾಲೇಜಿನ ಶೃಂಗ (18) ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ. ಬೆಂಗಳೂರಿನ ಮೂಕಾಂಬಿಕ ನಗರದ ಶೃಂಗ. ಭಾರತೀ ಕಾಲೇಜಿನಲ್ಲಿ ಡಿಪ್ಲೊಮಾ ಇನ್ ಸಿವಿಲ್ ಎಂಜಿನಿಯರಿಂಗ್ ವಿಭಾಗದಲ್ಲಿ ಮೂರನೇ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದಳು. ಅದೇ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ರಾಕೇಶ್ ಮತ್ತು ರಾಹುಲ್ ಈಕೆಯನ್ನು ನಿಂದಿಸಿದರೆಂಬ ಕಾರಣಕ್ಕೆ ಮನನೊಂದ ಶೃಂಗ, ಹಾಸ್ಟೆಲ್‌ಗೆ ಬಂದು ಕೊಠಡಿ ಬಾಗಿಲು ಹಾಕಿಕೊಂಡು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಈ ಸಂಬಂಧ ಮೃತ ವಿದ್ಯಾರ್ಥಿನಿಯ ತಾಯಿ ವಿ.ಆಶಾ ಕೆ.ಎಂ.ದೊಡ್ಡಿ ಪೊಲೀಸರಿಗೆ ದೂರು ನೀಡಿದ್ದಾರೆ.

ಬೀರುವಿನಲ್ಲಿದ್ದ ಚಿನ್ನಾಭರಣ ದೋಚಿದ ಕಳ್ಳರು

ಹಲಗೂರು: ಮನೆಯಲ್ಲಿ ಯಾರು ಇಲ್ಲದ ವೇಳೆ ಕಿಟಕಿ ಮುರಿದ ಕಳ್ಳರು ಬೀರುವಿನಲ್ಲಿದ್ದ ಚಿನ್ನಾಭರಣಗಳನ್ನು ದೋಚಿ ಪರಾರಿಯಾಗಿರುವ ಘಟನೆ ಸಮೀಪದ ಧನಗೂರು ಗ್ರಾಮದಲ್ಲಿ ನಡೆದಿದೆ. ಗ್ರಾಮದ ನವಾಜ್ ಷರೀಫ್ ಮತ್ತು ಕುಟುಂಬದ ಸದಸ್ಯರೆಲ್ಲರೂ ಕಾರ್ಯ ನಿಮಿತ್ತ ಮಾ.11ರಂದು ಬೆಂಗಳೂರಿಗೆ ತೆರಳಿದ್ದರು. ಈ ವೇಳೆ ಮನೆಯಲ್ಲಿ ಯಾರು ಇಲ್ಲದಿರುವ ಸಮಯ ನೋಡಿ ಮನೆ ಕಿಟಕಿ ಮುರಿದು ಮನೆಯೊಳಗೆ ನುಗ್ಗಿ ಬೀರುವಿನಲ್ಲಿ ಇಟ್ಟಿದ್ದ ಬೆಳ್ಳಿ ಪದಾರ್ಥಗಳು ಸೇರಿದಂತೆ ಚಿನ್ನ ಆಭರಣಗಳನ್ನು ಕಳವು ಮಾಡಿದ್ದಾರೆ. ಸುಮಾರು 1.21 ಲಕ್ಷ ರು. ಮೌಲ್ಯದ ಚಿನ್ನಾಭರಣಗಳನ್ನು ದೋಚಿದ್ದಾರೆ ಎಂದು ನವಾಜ್ ಷರೀಫ್ ದೂರು ದಾಖಲಿಸಿದ್ದಾರೆ.

ರಸ್ತೆ ಬದಿ ನಿಂತಿದ್ದ ಬೈಕ್ ಕಳವು

ಹಲಗೂರು: ಅಂಗನವಾಡಿ ಕೇಂದ್ರಕ್ಕೆ ಮಗು ಬಿಡಲು ಹೋಗಿ, ಹಿಂದುರುಗಿ ಬರುವಷ್ಟರಲ್ಲಿ ಮೋಟಾರ್‌ಬೈಕ್ ಕಳುವಾಗಿರುವ ಘಟನೆ ಸಮೀಪದ ಡಿ.ಹಲಸಹಳ್ಳಿ ಗ್ರಾಮದಲ್ಲಿ ಬುಧವಾರ ನಡೆದಿದೆ. ನಿರಂಜನ್ ಕುಮಾರ್‌ಅವರು ಮಾ.19 ರಂದು ಬುಧವಾರ ಬೆಳಗ್ಗೆ 10:30 ರ ಸಮಯದಲ್ಲಿ ತಮ್ಮ ಮಗುವನ್ನು ಸ್ವಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಬಿಡಲು ಬೈಕ್ ನಲ್ಲಿ ತೆರಳಿದ್ದರು. ರಸ್ತೆ ಬದಿಯಲ್ಲಿ ತಮ್ಮ ಹೀರೋ ಹೊಂಡಾ ಸ್ಪ್ಲೆಂಡರ್ ಬೈಕ್ ನಿಲ್ಲಿಸಿ ಅಂಗನವಾಡಿ ಕೇಂದ್ರಕ್ಕೆ ಮಗು ಬಿಟ್ಟು ಬರುವಷ್ಟರಲ್ಲಿ ಬೈಕ್ ನಾಪತ್ತೆಯಾಗಿದೆ ಎಂದು ನಿರಂಜನ್ ಕುಮಾರ್‌ದೂರು ದಾಖಲಿಸಿದ್ದಾರೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಇಂದು ಪೂಜಾ ಮಹೋತ್ಸವ

ಕೆ.ಎಂ.ದೊಡ್ಡಿ: ಸಮೀಪದ ಮೆಳ್ಳಹಳ್ಳಿ ಶ್ರೀ ಶನೇಶ್ವರ ಸ್ವಾಮಿ 73ನೇ ವರ್ಷದ ವಿಶೇಷ ಪೂಜಾ ಮಹೋತ್ಸವ ಮಾ.21 ರಂದು ಆರಂಭವಾಗಲಿದೆ. ಪ್ರತಿ ವರ್ಷದಂತೆ ಶ್ರೀ ವಿಶ್ವಾವಸುನಾಮ ಸಂವತ್ಸರ ಪಾಲ್ಗುಣ ಮಾಸದ ಶುಕ್ರವಾರ ಹೋಮ, ನವಗ್ರಹ ಪೂಜೆ, ಗಣಪತಿ ಹೋಮ ಇತ್ಯಾದಿಗಳು ಜರುಗಲಿವೆ. ಮಾ.22 ರಂದು ಬೆಳಗ್ಗೆ 7.30 ರಿಂದ ಅಭಿಷಕ ಪೂಜೆ ಮಹಾಮಂಗಳಾರತಿ, ಬೆಳಗ್ಗೆ 10.30 ರಿಂದ ವಿಶೇಷ ಪೂಜೆ , ಮಧ್ಯಾಹ್ನ 12.30 ರಿಂದ ಬಾಯಿಬೀಗ, ಮುಡಿಸೇವೆ, ಮತ್ತು ಶ್ರೀ ಶನೇಶ್ವರಸ್ವಾಮಿ ಪಲ್ಲಕ್ಕಿ ಉತ್ಸವ ಮಧ್ಯಾಹ್ನ2.30 ರಿಂದ ಭಕ್ತಾದಿಗಳಿಗೆ ಅನ್ನಸಂತರ್ಪಣೆ ನಡೆಯಲಿದೆ ಎಂದು ದೇಗುಲದ ವ್ಯವಸ್ಥಾಪಕ ಪೂಜಾರಿ ಮಹೇಶ್ ತಿಳಿಸಿದ್ದಾರೆ.

ಮದ್ದೂರು ತಾಲೂಕಿನ ವಿವಿಧೆಡೆ ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ಮದ್ದೂರು: ತಾಲೂಕಿನ ಕೆ.ಹೊನ್ನಲಗೆರೆ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದಲ್ಲಿ 1ನೇತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ವಿತರಣಾ ಕೇಂದ್ರ ವ್ಯಾಪ್ತಿಯ ಕೆ.ಬೆಳ್ಳೂರು, ಬ್ಯಾಡರಹಳ್ಳಿ, ತೊಪ್ಪನಹಳ್ಳಿ, ಹಳ್ಳಿಕೆರೆ, ಬಿ. ಗುಡ್ಡೆ, ಅರೆಕಲ್ಲು ದೊಡ್ಡಿ, ತೈಲೂರು ಹಾಗೂ ಕೆ.ಹೊನ್ನಲಗೆರೆ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಮಾ.22ರಂದು ಬೆಳಗ್ಗೆ 8 ರಿಂದ ಸಂಜೆ 2 ಗಂಟೆ ವರೆಗೆ ವಿದ್ಯುತ್ ಪೂರೈಕೆ ಸ್ಥಗಿತ ಗೊಳಿಸಲಾಗುವುದು ಎಂದು ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಮೋಹನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲೂಕಿನ ಬೆಸಗರಹಳ್ಳಿ

ಹಾಗೇ, ತಾಲೂಕಿನ ಬೆಸಗರಹಳ್ಳಿ 66/11 ವಿದ್ಯುತ್ ವಿತರಣಾ ಕೇಂದ್ರದಲ್ಲಿ 1ನೇತ್ರೈಮಾಸಿಕ ನಿರ್ವಹಣಾ ಕಾರ್ಯ ಮ್ಮಿಕೊಂಡಿರುವುದರಿಂದ ವಿತರಣಾ ಕೇಂದ್ರ ವ್ಯಾಪ್ತಿಯ ಬೆಸಗರಹಳ್ಳಿ, ಕೋಣಸಾಲೆ, ಮರಳಿಗ, ಮಾರಸಿಂಗನಹಳ್ಳಿ, ಹೊಸಕೆರೆ, ಬೆಳತೂರು, ಚಾಪುರ ದೊಡ್ಡಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಮಾ.22 ರಂದು ಬೆಳಗ್ಗೆ 8 ಗಂಟೆಯಿಂದ ಸಂಜೆ 2 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ಅಡಚಣೆ ಉಂಟಾಗಲಿದೆ ಎಂದು ಬೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ತಾಯಿ-ಮಗಳು ಸಾವಿನ ಪ್ರಕರಣ: ಹರಿಕೃಷ್ಣ ಪೊಲೀಸರಿಗೆ ಶರಣು

ಪೊಲೀಸರಿಂದ ಏಳು ಮಂದಿ ಆರೋಪಿಗಳ ಸೆರೆ; ನ್ಯಾಯಾಂಗ ಬಂಧನ | ಯುವತಿಯನ್ನು ಪ್ರೀತಿಸಿ ವಂಚಿಸಿದ್ದನೆನ್ನಲಾದ ಆರೋಪಿ ಹರಿಕೃಷ್ಣ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಆರೋಪಿ ಹರಿಕೃಷ್ಣ

ತಾಲೂಕಿನ ಹೆಬ್ಬಕವಾಡಿ ಗ್ರಾಮದ ತಾಯಿ-ಮಗಳು ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿ ಹರಿಕೃಷ್ಣ ಮಂಡ್ಯ ಗ್ರಾಮಾಂತರ ಪೊಲೀಸರ ಎದುರು ಶರಣಾಗಿದ್ದಾನೆ. ಈತನೂ ಸೇರಿದಂತೆ ಎಂಟು ಮಂದಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಂಪೇಗೌಡ, ಸರೋಜಮ್ಮ, ಹರಿಕೃಷ್ಣ, ಪುಟ್ಟೇಗೌಡ, ಮಂಜು, ಪ್ರಕಾಶ್, ಸುಚೇಂದ್ರಕುಮಾರ್‌ಹಾಗೂ ನಾಗೇಂದ್ರ ಬಂಧಿತ ಆರೋಪಿಗಳಾಗಿದ್ದಾರೆ. ತಾಯಿ ಲಕ್ಷ್ಮೀ ಸಾವಿನ ಪ್ರಕರಣದಲ್ಲಿ ಆರೋಪಿ ಹರಿಕೃಷ್ಣ ಪೊಲೀಸರೆದುರು ಶರಣಾಗಿದ್ದು, ಯುವತಿಯನ್ನು ಪ್ರೇಮಿಸಿ ವಂಚಿಸಿ ಆತ್ಮಹತ್ಯೆಗೆ ಕಾರಣನಾಗಿದ್ದಾನೆಂಬ ಆರೋಪದಡಿ ಹರಿಕೃಷ್ಣನನ್ನು ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ.

ಪ್ರಿಯಕರನ ವಂಚನೆಯಿಂದ ಮನನೊಂದಿದ್ದ ಯುವತಿ ವಿಜಯಲಕ್ಷ್ಮೀ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡ ಸಮಯದಲ್ಲೇ ಹರಿಕೃಷ್ಣ ವಿರುದ್ಧ ಯುವತಿಯ ಕುಟುಂಬದವರು ದೂರು ನೀಡಿದ್ದರೂ ಪೊಲೀಸರು ಆತನ ವಿರುದ್ಧ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ನ್ಯಾಯ ಕೇಳಲು ಹೋದ ಯುವತಿಯ ಕಡೆಯವರಿಗೆ ಕಾರದಪುಡಿ ಎರಚಿ ದೊಣ್ಣೆಗಳಿಂದ ಹಲ್ಲೆ ನಡೆಸಿದ್ದರು. ಇಡೀ ಪ್ರಕರಣ ರಾಜಕೀಯ ಸ್ವರೂಪವನ್ನು ಪಡೆದುಕೊಂಡಿತ್ತು. ಇದರಿಂದ ಬೇಸರಗೊಂಡ ತಾಯಿ ಲಕ್ಷ್ಮೀ ಕೂಡ ಡೆತ್‌ನೋಟ್ ಬರೆದಿಟ್ಟು ಮನೆಯಲ್ಲೇ ನೇಣಿಗೆ ಶರಣಾಗಿದ್ದರು.

ಆನಂತರದಲ್ಲಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಮಂಡ್ಯ ಗ್ರಾಮಾಂತರ ಠಾಣೆ ಪೊಲೀಸರು ಪ್ರಮುಖ ಆರೋಪಿ ಹರಿಕೃಷ್ಣ ಸೇರಿ 19 ಜನರ ವಿರುದ್ಧ ಪ್ರಕರಣ ದಾಖಲಿಸಿದ್ದರು.

ಹೆಬ್ಬಕವಾಡಿ ತಾಯಿ-ಮಗಳ ಸಾವಿನ ಪ್ರಕರಣದಲ್ಲಿ ಆರೋಪಿ ಹರಿಕೃಷ್ಣ ಪೊಲೀಸರಿಗೆ ಶರಣಾಗಿದ್ದಾನೆ. ಈತ ಸೇರಿದಂತೆ ಎಂಟು ಮಂದಿಯನ್ನು ನ್ಯಾಯಾಂಗ ಬಂಧನದಲ್ಲಿರಿಸಲಾಗಿದೆ. ಉಳಿದವರ ಪತ್ತೆಗೆ ಶೋಧ ಕಾರ್ಯ ನಡೆಸಲಾಗುತ್ತಿದೆ. ಈ ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ. ಎಷ್ಟೇ ಪ್ರಭಾವಿಗಳಾಗಿದ್ದರೂ ತಪ್ಪು ಸಾಬೀತಾದರೆ ಆರೋಪಿಗಳಿಗೆ ಯಾರಿಂದಲೂ ರಕ್ಷಣೆ ಸಿಗುವುದಿಲ್ಲ. ಪಾರದರ್ಶಕವಾಗಿ ತನಿಖೆಯನ್ನು ನಡೆಸಲಾಗುತ್ತಿದೆ.

• **ಮಲ್ಲಿಕಾರ್ಜುನ ಬಾಲದಂಡಿ** ಜಿಲ್ಲಾ ಪೊಲೀಸ್ ಅಧೀಕ್ಷಕರು, ಮಂಡ್ಯ

ಕೆಲವು ದಿನಗಳ ಕಾಲ ಹರಿಕೃಷ್ಣ ಸೇರಿದಂತೆ ಹಲವರು ತಲೆಮರೆಸಿಕೊಂಡಿದ್ದರು. ಪ್ರಕರಣ ದಾಖಲಾಗಿರುವ 19 ಜನರಲ್ಲಿ 8 ಮಂದಿಯನ್ನು ಪೊಲೀಸರು ಬಂಧಿಸಿದ್ದು, ಉಳಿದ ಆರೋಪಿಗಳಿಗಾಗಿ ಶೋಧ ಕಾರ್ಯ ಕೈಗೊಂಡಿದ್ದಾರೆ.

ಪ್ರಕರಣದಲ್ಲಿ ಎಂ.ಟಿ.ನಾಗರಾಜು, ಶ್ರೀಧರ್, ಚಿಕ್ಕತಿಮ್ಮೇಗೌಡ, ಗೋಮತಿ, ಶಿವಶಂಕರ, ನಾಗಣ್ಣ ಸೇರಿದಂತೆ 11 ಮಂದಿ ಆರೋಪಿಗಳು ಸೆರೆಯಾಗಬೇಕಿದೆ. ತಾಯಿ-ಮಗಳ ಸಾವಿನ ನಂತರ ಎಲ್ಲರೂ ತಲೆಮರೆಸಿಕೊಂಡಿದ್ದಾರೆ. ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಆರೋಪಿಗಳನ್ನು ಶೀಘ್ರವಾಗಿ ಬಂಧಿಸುವುದಾಗಿ ತಿಳಿಸಿದ್ದಾರೆ.

ದ್ವೇಷದ ರಾಜಕಾರಣಕ್ಕೆ ಕೈ ಬುನಾದಿ: ನಿಖಿಲ್

ಕೇತಗಾನಹಳ್ಳಿ ಜಮೀನು ವಿಚಾರವಾಗಿ ಕಾನೂನಾತ್ಮಕ ಹೋರಾಟ | ಗ್ಯಾರಂಟಿ ಯೋಜನೆಗಳಿಂದ ದಿವಾಳಿಯತ್ತ ಕರ್ನಾಟಕ

• **ಕನ್ನಡಪ್ರಭ ವಾರ್ತೆ** ಮಂಡ್ಯ

ದ್ವೇಷದ ರಾಜಕಾರಣಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಭದ್ರ ಬುನಾದಿ ಹಾಕಿದೆ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು.

ನಗರದ ಮಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಕಲುಷಿತ ಆಹಾರ ಸೇವಿಸಿ ಅಸ್ವಸ್ಥರಾದ ಮಳವಳ್ಳಿ ಗೋಕುಲ ವಿದ್ಯಾಸಂಸ್ಥೆ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಸ್ವಾತಂತ್ರ್ಯ ಬಂದಾಗಿನಿಂದಲೂ ದ್ವೇಷದ ರಾಜಕಾರಣಕ್ಕೆ ರಾಜ್ಯದಲ್ಲಿ ಸೊಪ್ಪು ಹಾಕಿರಲಿಲ್ಲ. ಕಳೆದೆರಡು ಅವಧಿಯ ಕಾಂಗ್ರೆಸ್ ಸರ್ಕಾರದಲ್ಲಿ ಎಸ್‌ಐಟಿ, ಲೋಕಾಯುಕ್ತಸಂಸ್ಥೆಗಳನ್ನುಪ್ರಭಾವಿಗಳು ದುರುಪಯೋಗಪಡಿಸಿಕೊಂಡುಕಪ್ಪುಚುಕ್ಕೆ ಮೂಡಿಸಿದ್ದಾರೆ. ಇದರಿಂದ ರಾಜ್ಯಕ್ಕೆ ಕಳಂಕ ತಂದುಕೊಂಡಿದ್ದಾಗಿದೆ ಎಂದರು.

ಬಿಡದಿಯ ಕೇತಗಾನಹಳ್ಳಿ ಜಮೀನನ್ನು 1984-85ರಲ್ಲಿ ಚೆನ್ನಾಂಬಿಕಾ ಫಿಲಂಸ್‌ನಿಂದ ಬಂದ ಹಣದಲ್ಲಿ ಕುಮಾರಸ್ವಾಮಿ ಅವರು ಖರೀದಿಸಿದ್ದರು. ಅಲ್ಲಿಂದ ಹಲವಾರು ಸರ್ಕಾರಗಳು ಬಂದುಹೋಗಿವೆ. ಆಗಿನಿಂದ ಕಾಣದ ಒತ್ತುವರಿ ಈಗ ಆಗಿದೆಯೇ. ನಾವೂ ಈ ವಿಚಾರವಾಗಿ ಕಾನೂನಾತ್ಮಕ ಹೋರಾಟ ನಡೆಸುತ್ತೇವೆ.

ಕಾಂಗ್ರೆಸ್ ದ್ವೇಷದ ರಾಜಕಾರಣ ಮಾಡಿದರೂ ಒಮ್ಮೆ ಜೆಡಿಎಸ್ ಅಧಿಕಾರಕ್ಕೆ ಬಂದರೆ ದ್ವೇಷದ ರಾಜಕಾರಣಕ್ಕೆ ಎಂದಿಗೂ ಮುಂದಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ ನಿಖಿಲ್, ಮಂಡ್ಯ ಜನರನ್ನು ಛತ್ರಿಗಳುಎಂದಿರುವಡಿ.ಕೆ.ಶಿವಕುಮಾರ್ ಹೇಳಿಕೆ ಕುರಿತು, ಆರು ಮಂದಿ ಕಾಂಗ್ರೆಸ್ ಶಾಸಕರನ್ನು ಕೊಟ್ಟಿರುವ ಜನರ ಬಗ್ಗೆ ಇಂತಹ ಹೇಳಿಕೆಗಳನ್ನು ನೀಡುವುದು ನಾಯಕರಾದವರಿಗೆಶೋಭೆತರುವುದಿಲ್ಲ, ನಾಯಕರ ಹೇಳಿಕೆಗಳನ್ನು ಸಮರ್ಥಿಸಿಕೊಳ್ಳುವ ಜಿಲ್ಲೆಯ ಪ್ರಭಾವಿ ಶಾಸಕರೊಬ್ಬರು ಛತ್ರಿಗಳು ಎಂದರೆ ಪ್ರಬುದ್ಧರು, ಬುದ್ಧಿವಂತರು, ಸಮಯ ಬಂದಾಗ ಸರಿಯಾದ ತೀರ್ಮಾನ ತೆಗೆದುಕೊಳ್ಳುವವರು ಎಂದು ವ್ಯಾಖ್ಯಾನ ಬೇರೆ ನೀಡುತ್ತಾರೆ ಎಂದು ಜರಿದರು.

ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಜಿಪಂ ಮಾಜಿ ಸದಸ್ಯ ಕಂಸಾಗರ ರವಿ, ಬಿ.ಆರ್.ಸುರೇಶ್, ನಗರಸಭೆ ಸದಸ್ಯ ಟಿ.ಕೆ.ರಾಮಲಿಂಗು ಇತರರಿದ್ದರು.

ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಕಲುಷಿತ ಆಹಾರ ಸೇವಿಸಿ ಅಸ್ವಸ್ಥರಾದ ಮಳವಳ್ಳಿ ಗೋಕುಲ ವಿದ್ಯಾಸಂಸ್ಥೆ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದರು.

ರಾಮನಗರ ಹೆಸರು ಬದಲಿಸಿದಾಕ್ಷಣ ಅಭಿವೃದ್ಧಿಯಾಗುವುದಿಲ್ಲ, ಮಾತೆತ್ತಿದರೆ ಗ್ಯಾರಂಟಿ ಎನ್ನುತ್ತಾರೆ. ಈಗಾಗಲೇ ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಸ್ಥಗಿತಗೊಂಡು, ರಾಜ್ಯದ ಜನರ ಮೇಲೆ ಬೆಲೆ ಏರಿಕೆ ಬರೆ ಎಳೆಯುತ್ತಿದ್ದಾರೆ. ಈಗಾಗಲೇ ಲಕ್ಷಾಂತರ ಕೋಟಿ ಸಾಲದ ಹೊರೆ ಕರ್ನಾಟಕದ ಮೇಲಿದೆ. ಹಿಮಾಚಲ ಪ್ರದೇಶ, ತೆಲಂಗಾಣ ಸರ್ಕಾರಗಳು ದಿವಾಳಿಯ ಅಂಚಿಗೆ ಬಂದಿವೆ. ರಾಜ್ಯದಲ್ಲೂ ಹಣವಿಲ್ಲದೆ ಒದ್ದಾಡುತ್ತಿದೆ. ಮುಂದೆ ರಾಜ್ಯಕ್ಕೆ ಯಾವ ಸ್ಥಿತಿ ಎದುರಾಗುವುದೋ ನೋಡೋಣ.

• **ನಿಖಿಲ್ ಕುಮಾರಸ್ವಾಮಿ** ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ

ಕರ್ನಾಟಕ ಬಂದ್ ಬೆಂಬಲಿಸುವಂತೆ ಕನ್ನಡಸೇನೆ ಮಂಜುನಾಥ್ ಮನವಿ

ರಾಜ್ಯದಲ್ಲಿ ಎಂಇಎಸ್ ಸಂಘಟನೆ ನಿಷೇಧಕ್ಕೆ ಒತ್ತಾಯ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ನೇತೃತ್ವದಲ್ಲಿ 2000ಕ್ಕೂ ಹೆಚ್ಚು ಕನ್ನಡಪರ ಸಂಘಟನೆಗಳು ಹಲವು ವಿಷಯಗಳನ್ನೊಳಗೊಂಡಂತೆ ಮಾ.22ರಂದು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಜಿಲ್ಲೆಯ ಜನರು, ವರ್ತಕರು ಬೆಂಬಲ ನೀಡಬೇಕೆಂದು ಕನ್ನಡ ಸೇನೆ ಕರ್ನಾಟಕದ ಜಿಲ್ಲಾಧ್ಯಕ್ಷ ಎಚ್.ಸಿ.ಮಂಜುನಾಥ್ ಮನವಿ ಮಾಡಿದರು.

ಕರ್ನಾಟಕ ಬಂದ್ ಮೂಲಕ ರಾಜ್ಯದ ಪರವಾಗಿ ಆಗಬೇಕಾದ ವಿಷಯಗಳ ಕುರಿತು 17ಕ್ಕೂ ಹೆಚ್ಚು ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಬೆಳಗಾವಿಯಲ್ಲಿ ಎಂಇಎಸ್ ಸಂಘಟನೆಯ ಪುಂಡರು ಪದೇ ಪದೇ ಕನ್ನಡಿಗರ ಮೇಲೆ ಹಲ್ಲೆ ಮಾಡುತ್ತಿದ್ದು, ರಾಜ್ಯದಲ್ಲಿ ಎಂಇಎಸ್ ಸಂಘಟನೆ ನಿಷೇಧ ಮಾಡಬೇಕು. ಬೆಂಗಳೂರಿಗೆ ಕುಡಿಯುವ ನೀರಿನ ಹೆಸರಲ್ಲಿ 6ನೇ ಹಂತದ ಯೋಜನೆ ಮೂಲಕ ರೈತರ ಒಂದು ಬೆಳೆಯ ನೀರನ್ನು ನೀಡಿ ರೈತರನ್ನು ಬೀದಿಗೆ ತಳ್ಳುವ ಯೋಜನೆ ಕೈ ಬಿಡಬೇಕು, ಡಾ.ಸರೋಜಿನಿ ಮಹಿಷಿ ವರದಿ ಜಾರಿ, ಮೇಕೆದಾಟು ಯೋಜನೆ ಪ್ರಾರಂಭ, ಮಹದಾಯಿ, ಕಳಸ-ಬಂಡೂರಿ ಯೋಜನೆಗಳನ್ನು ಕಾರ್ಯಗತಗೊಳಿಸುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಲಾಗುವುದು ಎಂದರು.

ಬಂದ್‌ಗೆ ಜಿಲ್ಲೆಯ ಎಲ್ಲಾ ಸಾಗರೀಕರು, ವರ್ತಕರು, ಬೇಕರಿ ಮಾಲೀಕರು, ಆಟೋ ಚಾಲಕರು, ಬೀದಿ ಬದಿ ವ್ಯಾಪಾರಿಗಳು, ಲಾರಿ ಮಾಲೀಕರು, ಚಿನ್ನ ಮತ್ತು ಬೆಳ್ಳಿ ವರ್ತಕರು, ಎಲ್ಲಾ ಪಕ್ಷದ, ಸಂಘಟನೆಗಳ ನಾಯಕರು ಸಹಕಾರ ನೀಡಲಿದ್ದಾರೆ ಎಂದರು. ಕೆಲವು ಸಂಘಟನೆಯವರು ಬಂದ್‌ನಲ್ಲಿ ಪಾಲ್ಗೊಳ್ಳುವುದಿಲ್ಲ ಆದರೆ, ನೈತಿಕ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ನಾಯಕರ ನಡುವಿನ ಭಿನ್ನಾಭಿಪ್ರಾಯವನ್ನು ನಾಯಕರೇ ಸರಿಪಡಿಸಬೇಕಿದೆ. ಶಿವಾಜಿ ಜಯಂತಿ ಆಚರಣೆಗೆ ವಿರೋಧವಿಲ್ಲ, ಭಾಷೆ ಹೇರಿಕೆ ಖಂಡಿಸುತ್ತೇವೆ. ಇಮ್ಮಡಿ ಪುಲಿಕೇಶಿ ಜಯಂತಿ ಆಚರಣೆಯಿಂದ ಕನ್ನಡಿಗರ ಹೆಮ್ಮೆ ಹೆಚ್ಚಲಿದ್ದು, ರಾಜ್ಯ ಸರ್ಕಾರ ಯಾವುದೇ ಭಾವನೆಗಳಿಗೆ ನೋವಾಗದಂತೆ ನಡೆದುಕೊಳ್ಳಬೇಕು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಗೋಷ್ಠಿಯಲ್ಲಿ ಕಾರ್ಯಾಧ್ಯಕ್ಷ ಎಂ.ಎಸ್.ಮಂಜುನಾಥ್, ರಾಜ್ಯ ಸಂಚಾಲಕ ಜಿ.ಮಹಂತಪ್ಪ, ಶಿವಕುಮಾರ್, ಶಿವಾಜಿ, ಪವಿತ್ರ ನಾಗರಾಜ್, ಕಮ್ಮನಾಯಕನಹಳ್ಳಿ ಮಂಜುನಾಥ್, ಪ್ರಸನ್ನ, ವೇಣುಗೋಪಾಲ್ ಇದ್ದರು.

ಚುನಾವಣೆಯ ಷಡ್ಯಂತ್ರ ಬಗ್ಗೆ ಚರ್ಚೆ ಮಾಡುವುದಿಲ್ಲ: ನಿಖಿಲ್

ನಿಖಿಲ್ ಕುಮಾರಸ್ವಾಮಿ ಯುವಕರ ಅಭಿಮಾನಿಗಳ ಸಂಘ ಉದ್ಘಾಟನೆ

• **ಕನ್ನಡಪ್ರಭ ವಾರ್ತೆ** ಮಳವಳ್ಳಿ

ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಮತ್ತೆ ಜೆಡಿಎಸ್ ಅಧಿಕಾರಕ್ಕೆ ತರಲು ಶ್ರಮಿಸಲಾಗುವುದು ಎಂದು ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ತಾಲೂಕಿನ ಅಮೃತೇಶ್ವರನಹಳ್ಳಿಯಲ್ಲಿ ನಿಖಿಲ್ ಕುಮಾರಸ್ವಾಮಿ ಯುವಕರ ಅಭಿಮಾನಿಗಳ ಸಂಘವನ್ನು ಗುರುವಾರ ಉದ್ಘಾಟಿಸಿ ಮಾತನಾಡಿ, ಜೆಡಿಎಸ್ ಪ್ರಾಮಾಣಿಕ ಕಾರ್ಯಕರ್ತರು ಹಾಗೂ ಅಭಿಮಾನಿಗಳು ನನ್ನ ಹೃದಯದಲ್ಲಿದ್ದಾರೆ. ನನ್ನ ಹೆಸರಿನಲ್ಲಿ ಅಭಿಮಾನಿಗಳ ಸಂಘ ಕಟ್ಟಿ ಪಕ್ಷ ಸಂಘಟನೆಗೆ ಮುಂದಾಗಿರುವುದು ಒಳ್ಳೆಯ ಬೆಳವಣಿಗೆ ಎಂದರು.

ರಾಜಕೀಯವಾಗಿ ಜೆಡಿಎಸ್ ಸ್ವಲ್ಪ ಕುಗ್ಗುದೆ ಎಂಬ ಸಂದರ್ಭದಲ್ಲಿ ರಾಜ್ಯದಲ್ಲಿ ಪಕ್ಷಕ್ಕೆ ಬೆನ್ನುತಟ್ಟಿ ಬಲ ತುಂಬಿದ ಜಿಲ್ಲೆ ಇದ್ದರೆ ಅದು ಮಂಡ್ಯ ಮಾತ್ರ. ಜೆಡಿಎಸ್‌ಗೆ ಶಕ್ತಿ ನೀಡಿದ ಕೀರ್ತಿ ಮಂಡ್ಯಕ್ಕೆ ಸೇರುತ್ತದೆ ಎಂದರು.

2019ರ ಲೋಕಸಭಾ ಚುನಾವಣೆಯ ಷಡ್ಯಂತ್ರ ಬಗ್ಗೆ ಚರ್ಚೆ ಮಾಡುವುದಿಲ್ಲ. 2024ರ ಲೋಕಸಭೆ ಚುನಾವಣೆಯಲ್ಲಿ ನನ್ನ ಸ್ಪರ್ಧೆ ಬಗ್ಗೆ ನೀವೆಲ್ಲರೂ ಅಪೇಕ್ಷೆ ಪಟ್ಟರೂ ಜೆಡಿಎಸ್ ವರಿಷ್ಠರಾದ ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಹಾಗೂ ರಾಜ್ಯದ 31 ಜಿಲ್ಲೆಗಳ ಲಕ್ಷಾಂತರ ಕಾರ್ಯಕರ್ತರು ಕಟ್ಟಿ ಬೆಳೆಸಿದ ಪ್ರಾದೇಶಿಕ ಪಕ್ಷಕ್ಕೆ ಭದ್ರ ಬುನಾದಿ ಹಾಕುವ ದೃಷ್ಟಿಯಿಂದ ನಾನು ಸದ್ಯದ ಮಟ್ಟಿಗೆ ಚುನಾವಣೆ ಬೇಡ ಎನ್ನುವ ತೀರ್ಮಾನಕ್ಕೆ ಬರಬೇಕಾಯಿತು ಎಂದರು.

ನನ್ನ ಹೆಸರಿನಲ್ಲಿ ಅಭಿಮಾನಿಗಳ ಸಂಘ ಕಟ್ಟಿ ಪಕ್ಷದ ಸಂಘಟನೆಗೆ ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಮುಂದುವರಿಯಲಿ. ಇದಕ್ಕೆ ತಾವು ಸದಾ ಕೈ ಜೋಡಿಸುವುದಾಗಿ ತಿಳಿಸಿದರು.

ಅಭಿಮಾನಿಗಳ ಸಂಘವನ್ನು ಉದ್ಘಾಟಿಸಲು ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ನಿಖಿಲ್ ಅವರಿಗೆ ಜೆಡಿಎಸ್ ಮುಖಂಡರು ಹಾಗೂ ಅಭಿಮಾನಿಗಳು ಅದ್ದೂರಿ ಸ್ವಾಗತ ಕೋರಿದರು. ಮಾಜಿ ಶಾಸಕ ಕೆ.ಅನ್ನದಾನಿ, ಜೆಡಿಎಸ್ ಯುವ ಘಟಕದ ಜಿಲ್ಲಾ ಅಧ್ಯಕ್ಷ ಬಿ.ರವಿ ಕಂಸಾಗರ, ಪುರಸಭೆ ಉಪಾಧ್ಯಕ್ಷ ಬಸವರಾಜು, ಸದಸ್ಯರಾದ ಟಿ.ನಂದಕುಮಾರ್, ಸಿದ್ದರಾಜು, ಗ್ರಾಪಂ ಅಧ್ಯಕ್ಷ ಮರಿಸ್ವಾಮಿ, ಉಪಾಧ್ಯಕ್ಷೆ ಸುಧಾ, ಸದಸ್ಯ ಪುಟ್ಟರಾಜು, ಪಿಎಲ್ಡಿ ಬ್ಯಾಂಕ್ ನಿರ್ದೇಶಕರಾದ ದೊಡ್ಡಮಾದೇಗೌಡ, ಹನುಮಂತು, ಜವರೇಗೌಡ, ಮುಖಂಡರಾದ ರೇವಣ್ಣ, ಕುಮಾರ್, ಶಂಕರೇಗೌಡ, ಕಾಂತರಾಜು ಪಾಲ್ಗೊಂಡಿದ್ದರು.

ಕುಡಿಯುವ ನೀರಿನ ಕಾಮಗಾರಿಗೆ ನಗರಸಭೆ ಹಣ ಕೊಟ್ಟಿಲ್ಲ: ಸಚಿವ

3.50 ಕೋಟಿ ರು.ಗೆ ಅಂದಾಜು ಪಟ್ಟಿ ತಯಾರಿಸಿ ಸಲ್ಲಿಕೆ

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಗರದ ಕೆಎಚ್‌ಬಿ ಬಡಾವಣೆಗೆ ಕುಡಿಯುವ ನೀರು ಪೂರೈಸುವ ಕಾಮಗಾರಿಗೆ ನಗರಸಭೆ ಹಣ ಬಿಡುಗಡೆ ಮಾಡದಿರುವುದರಿಂದ ಇದುವರೆಗೆ ಯಾವುದೇ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗಿಲ್ಲ ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್. ಸುರೇಶ್ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಮಧು ಜಿ. ಮಾದೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕುಡಿಯುವ ನೀರಿಗೆ ಹೊಸದಾಗಿ ವಿತರಣಾ ಕೊಳವೆ ಮಾರ್ಗಗಳ ಅಳವಡಿಕೆ ಮತ್ತು ಓವರ್ ಹೆಡ್ ಟ್ಯಾಂಕ್‌ಗಳನ್ನು ಪುನರುಜ್ಜೀವನಗೊಳಿಸಿ ಕಾವೇರಿ ನೀರು ಪೂರೈಕೆಗೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು 3.50 ಕೋಟಿ ರು. ಅಗತ್ಯವಿದೆ. 18.6.2024ರಲ್ಲೇ ಪೌರಾಯುಕ್ತರಿಗೆ ಅಂದಾಜುಪಟ್ಟಿ ಕಳುಹಿಸಿದ್ದರೂ ಹಣ ಬಿಡುಗಡೆಗೆ ಕ್ರಮ ಕೈಗೊಂಡಿರುವುದಿಲ್ಲ.

ಕೆಎಚ್‌ಬಿ ಬಡಾವಣೆಯು 2019ರಲ್ಲಿ ನಗರಸಭೆಗೆ ಹಸ್ತಾಂತರವಾಗಿದೆ. ಆ ಸಮಯದಲ್ಲಿ ಗೃಹಮಂಡಳಿಯಿಂದ ನಗರಸಭೆಗೆ 5.50 ಕೋಟಿ ರು. ಪಾವತಿಸಿದ್ದು, ಈ ಅನುದಾನದಲ್ಲಿ ಬಡಾವಣೆಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಗಳ ಅಭಿವೃದ್ಧಿಗೆ 4.46 ಕೋಟಿ ರು. ವೆಚ್ಚ ಮಾಡಲಾಗಿದೆ ಎಂದರು.

ಬಡಾವಣೆ ನಿರ್ಮಾಣ ಸಮಯದಲ್ಲೇ ಗೃಹ ಮಂಡಳಿ ಅಳವಡಿಸಿರುವ ನೀರು ಸರಬರಾಜು ಮಾರ್ಗಗಳು ಬಳಕೆಯಾಗದೆ ದುರಸ್ತಿಯಲ್ಲಿದ್ದು, ಉಳಿಕೆ 1.03 ಕೋಟಿ ರು. ಹಣದಲ್ಲಿ ಬಡಾವಣೆಯ ನೀರು ಸರಬರಾಜು ವ್ಯವಸ್ಥೆ ಮತ್ತು ಬೀದಿ ದೀಪಗಳ ಅಳವಡಿಸುವ ಕಾಮಗಾರಿಗಳಿಗೆ ಕ್ರಿಯಾ ಯೋಜನೆರೂಪಿಸಿ ಆದ್ಯತೆಗೆ ಅನುಗುಣವಾಗಿ ಕ್ರಮ ಜರುಗಿಸಲಾಗುವುದು ಎಂದರು.

ಬಡಾವಣೆಗೆ ಕಾವೇರಿ ನೀರು ಸರಬರಾಜು ಮಾಡಲು 93.59 ಲಕ್ಷ ರು.ಗಳನ್ನು ಗೃಹಮಂಡಳಿ ವತಿಯಿಂದ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಭರಿಸಲಾಗಿದೆ. ಹಾಲಿ ಇರುವ ಮೇಲ್ಮಟ್ಟ ಜಲ ಸಂಗ್ರಹಾಗಾರವನ್ನು ಹೊಳಲು ಸರ್ಕಲ್‌ನಿಂದ ಕೆಎಚ್‌ಬಿ ಬಡಾವಣೆಯವರೆಗೂ ಅಳವಡಿಸಲಾಗಿದ್ದ 200 ಮಿ.ಮೀ. ವ್ಯಾಸದ ಫೀಡರ್‌ಕೊಳವೆ ಮಾರ್ಗವನ್ನು ಹಾಗೂ ಪಂಪುಗಳ ದುರಸ್ತಿಗೆ 16.34 ಲಕ್ಷ ರು.ಗಳನ್ನು ಗೃಹ ಮಂಡಳಿಯಿಂದ ಮಂಡಳಿಗೆ ಭರಿಸಿದ್ದರಿಂದ ದುರಸ್ತಿ ಕಾಮಗಾರಿ ಕೈಗೊಂಡು ಜಲ ಸಂಗ್ರಹಾಗಾರಕ್ಕೆ ನೀರು ತುಂಬಿಸಿ ಹಸ್ತಾಂತರಿಸಲಾಗಿದೆ.

ಈ ಬಡಾವಣೆಯಲ್ಲಿ ಒಟ್ಟು 1464 ನಿವೇಶನಗಳಿದ್ದು, 234 ಮನೆಗಳು ನಿರ್ಮಾಣವಾಗಿವೆ. ಒಟ್ಟು 1248 ಜನಸಂಖ್ಯೆಯನ್ನು ಒಳಗೊಂಡಿದ್ದು, ಇಲ್ಲಿನ ನೀರಿನ ಗುಣಮಟ್ಟವನ್ನು ಆಗಾಗ ಪರೀಕ್ಷೆಗೊಳಪಡಿಸಲಾಗುತ್ತಿದೆ. ಹಲವು ವರ್ಷಗಳಿಂದ ನೀರು ಸರಬರಾಜು ವಿತರಣಾ ಕೊಳವೆ ಮಾರ್ಗಗಳನ್ನು ಬಳಸದಿದ್ದ ಕಾರಣ ಕೊಳವೆಗಳು ಹಾಳಾಗಿವೆ. ಇವುಗಳ ದುರಸ್ತಿ ಕಾಮಗಾರಿಗೆ ನೀರು ಸರಬರಾಜು ಮಂಡಳಿ 2021-22ರ ದರಪಟ್ಟಿಯಂತೆ 64.50 ಲಕ್ಷ ರು.ಗಳಿಗೆ ಅಂದಾಜು ಪಟ್ಟಿ ತಯಾರಿಸಿ 12.08.2022ರಲ್ಲೇ ನಗರಸಭೆಗೆ ಸಲ್ಲಿಸಿದ್ದರೂ ಮಂಡಳಿಗೆ ಹಣ ಭರಿಸಿಲ್ಲವೆಂದು ತಿಳಿಸಿದ್ದಾರೆ. ಪ್ರಸ್ತುತ ನೀರು ಸರಬರಾಜು ಮಾಡಲು 3.50 ಕೋಟಿ ರು. ಅವಶ್ಯಕತೆ ಇದ್ದು, ನಗರಸಭೆ ಭರಿಸಿದರೆ ಕಾಮಗಾರಿ ಕೈಗೊಳ್ಳಲಾಗುವುದು ಎಂದರು.

ವಿವಿಧೋದ್ದೇಶ ಪ್ರಾಥಮಿಕ ಕೃಷಿ ಸಂಘಕ್ಕೆ ಮಂಜುರಾಜು, ಲಲಿತಾ ಆಯ್ಕೆ: ಸಂಭ್ರಮ

• **ಕನ್ನಡಪ್ರಭ ವಾರ್ತೆ** ಮದ್ದೂರು

ತಾಲೂಕಿನ ಗೆಜ್ಜಲಗೆರೆ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಬಿಜೆಪಿ ಮತ್ತು ಜೆಡಿಎಸ್ ಬೆಂಬಲಿತ ಮಂಜು ರಾಜು, ಉಪಾಧ್ಯಕ್ಷರಾಗಿ ಎಚ್.ಎಸ್.ಲಲಿತಮ್ಮ ಗುರುವಾರ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಂಜುರಾಜ್, ಉಪಾಧ್ಯಕ್ಷ ಸ್ಥಾನಕ್ಕೆ ಲಲಿತಮ್ಮ ಹೊರತುಪಡಿಸಿ ಬೇರೆಯವರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆ ಮಾಡಲಾಗಿದೆಎಂದುಚುನಾವಣಾಧಿಕಾರಿಯಾಗಿದ್ದ ಜಿ.ವಿ.ಮುತ್ತುರಾಜು ಅಂತಿಮವಾಗಿ ಪ್ರಕಟಿಸಿದರು.

ಬಳಿಕನೂತನ ಅಧ್ಯಕ್ಷ ಮಂಜುರಾಜ್ ಮಾತನಾಡಿ, ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾಗಲು ಮನ್ಮುಲ್ ನಿರ್ದೇಶಕ, ಬಿಜೆಪಿ ಮುಖಂಡ ಎಸ್.ಪಿ.ಸ್ವಾಮಿ. ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಹಾಗೂ ಎನ್‌ಡಿಎ ಸೇರಿದಂತೆ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಲು ಸಹಕಾರ ನೀಡಿದ್ದಾರೆ.ಸಹಕಾರ ಸಂಘವನ್ನು ಪ್ರಸ್ತುತ ಇರುವ ಸ್ಥಿತಿಗಿಂತ ಹೆಚ್ಚಿನ ರೀತಿಯಲ್ಲಿ ಆರ್ಥಿಕ ಅಭಿವೃದ್ಧಿ ಸಾಧಿಸಲು ಸಹಕಾರ ನೀಡುವ ಜೊತೆಗೆ ರೈತರಿಗೆ ಕಾಲಕಾಲಕ್ಕೆ ಸಂಘದಿಂದ ಸಾಲ ಸೌಲಭ್ಯ, ರಸ ಗೊಬ್ಬರಗಳ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡುವುದಾಗಿ ಭರವಸೆ ನೀಡಿದರು.

ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷರನ್ನು ನಿರ್ದೇಶಕರಾದ ಜಿ.ಬಿ.ಕೃಷ್ಣ ಅಲಿಯಾಸ್ ಡಾಬಾ ಕಿಟ್ಟಿ, ಶಿವಣ್ಣ, ಕೆ.ಪಿ. ಶ್ರೀಧರ. ಜಿ.ಎಸ್. ಪ್ರಕಾಶ್, ಜಿ.ಎನ್.ಶಿವಕುಮಾರ್, ಕೆ.ಎಸ್. ಹರೀಶ್, ಲಿಂಗಮ್ಮ, ಸರಿತಾ, ಜಿ.ಎಸ್. ಶ್ರೀಕಂಠ, ಜಿಲ್ಲಾ ಸಹಕಾರ ಬ್ಯಾಂಕ್ ಪ್ರತಿನಿಧಿ ಅರವಿಂದ, ಮುಖ್ಯ ಕಾರ್ಯನಿರ್ವಣಾಧಿಕಾರಿ ಕೆ.ಡಿ. ರಾಜೇಶ್, ಪೀ ಕಾರ್ಡ್ ಬ್ಯಾಂಕ್ ಅಧ್ಯಕ್ಷ ಸಿದ್ದೇಗೌಡ, ತಾಪಂ ಮಾಜಿ ಅಧ್ಯಕ್ಷ ಜಿ.ಪಿ. ಯೋಗೇಶ್, ತಾಲೂಕು ಬಿಜೆಪಿ ಉಪಾಧ್ಯಕ್ಷ ಗೆಜ್ಜಲಗೆರೆ ಮೋಹನ್, ಸಂತೋಷ,ಶ್ರೀನಿವಾಸ,, ರಾಘವೇಂದ್ರ, ಆತ್ಮಾನಂದ, ಈರಪ್ಪ, ಕುದುರೆಗುಂಡಿ ನಾಗೇಶ ಮಾಲಾರ್ಪಣೆ ಮಾಡಿ ಅಭಿನಂದಿಸಿದರು.

ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್
(ಒಂದು ನಿಗದಿತ ವಾಣಿಜ್ಯ ಬ್ಯಾಂಕ್)

ನೋಂದಾಯಿತ ಕಚೇರಿ: ದಿ ಫೇರ್‌ವೇ, ನೆಲ ಮತ್ತು ಮೊದಲ ಮಹಡಿ, ಸರ್ವೆ ನಂ.10/1, 11/2 & 12/2ಬಿ, ದೊಮ್ಮಲೂರು ಪಕ್ಕ, ಕೋರಮಂಗಲ ಇನ್ನರ್ ರಿಂಗ್ ರಸ್ತೆ, ಇಜಿಎಲ್ ಬಿಸಿನೆಸ್ ಪಾರ್ಕ್ ಪಕ್ಕ, ಚಲ್ಲಘಟ್ಟ, ಬೆಂಗಳೂರು-560071.

ಇ-ಹರಾಜು ಸೂಚನೆ

ಸೆಕ್ಯೂರಿಟಿ ಇಂಟರೆಸ್ಟ್ (ಎನ್‌ಫೋರ್ಸ್‌ಮೆಂಟ್) ನಿಯಮಗಳು,2002ರ ನಿಯಮ 8(6) ಮತ್ತು 9 ರ ನಿಬಂಧನೆಯೊಂದಿಗೆ ಓದಿಕೊಂಡು ಸೆಕ್ಯೂರಿಟೈಜೇಷನ್ ಅಂಡ್ ರಿಕನ್‌ಸ್ಟ್ರಕ್ಷನ್ ಆಫ್ ಫೈನ್ಯಾನ್ಷಿಯಲ್ ಅಸೆಟ್ಸ್ ಮತ್ತು ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯೂರಿಟಿ ಇಂಟರೆಸ್ಟ್ ಆಕ್ಟ್, 2002ರ ಅಡಿಯಲ್ಲಿ ಸ್ಥಿರಾಸ್ತಿ ಸ್ವತ್ತುಗಳ ಮಾರಾಟಕ್ಕಾಗಿ ಇ-ಹರಾಜು ಮಾರಾಟ ಪ್ರಕಟಣೆ.

ಸರ್ಫೇಸಿ ಕಾಯಿದೆಯ ಸೆಕ್ಷನ್ 13(4) ಅಡಿಯಲ್ಲಿ ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್‌ನ ಅಧಿಕೃತ ಅಧಿಕಾರಿಯಾಗಿ ಕೆಳಸಹಿದಾರರು ಅಧಿಕಾರಗಳನ್ನು ಚಲಾಯಿಸುವ ಮೂಲಕ ಈ ಕೆಳಗಿನ ಆಸ್ತಿಯನ್ನು ಸ್ವಾಧೀನಪಡಿಸಿಕೊಂಡಿದ್ದಾರೆ. ಬ್ಯಾಂಕಿಗೆ ಬರಬೇಕಾದ ಬಾಕಿಗಳನ್ನು ಸಾರ್ವಜನಿಕರಿಗೆ ಮತ್ತು ಸಾಲಗಾರರಿಗೆ ಈ ಮೂಲಕ ತಿಳಿಸುವುದೇನೆಂದರೆ ಕೆಳಗೆ ವಿವರಿಸಲಾದ ಅಡಮಾನ ಇಟ್ಟಿರುವ ಸ್ವತ್ತುಗಳನ್ನು ಆನ್‌ಲೈನ್ ಹರಾಜು (ಇ-ಹರಾಜು) ಮೂಲಕ "ಎಲ್ಲಿ ಹೇಗಿದೆಯೋ ಹಾಗೆ" ಮತ್ತು "ಎಲ್ಲಿ ಏನಿದೆಯೋ ಹಾಗೆ" ಈ ಕೆಳಗೆ ನಿಗದಿಪಡಿಸಿದ ದಿನಾಂಕಂದು ಹರಾಜು ಮಾಡಲಾಗುತ್ತದೆ.

ಕ್ರ ಸಂ	ಸಾಲದ ಖಾತೆ ಸಂಖ್ಯೆ	ಸಾಲಗಾರರ/ಸಹ-ಸಾಲಗಾರರ/ ಜಾಮೀನುದಾರರ ಮೂಲ ಹೆಸರು	ಸೂಚನೆ ದಿನಾಂಕ 13-2 ರಂದು	ಸ್ವಾಧೀನ ದಿನಾಂಕ	18.03.2025 ರಂದು ಇದ್ದಂತೆ ಪ್ರಸ್ತುತ ಬಾಕಿ ಮೊತ್ತ	ಆಸ್ತಿಯ ಪರಿಶೀಲನೆಯ ದಿನಾಂಕ ಮತ್ತು ಸಮಯ	ಐಎನ್‌ಆರ್ ಗಳಲ್ಲಿ ಮೀಸಲು ಬೆಲೆ	ಮುಂಗಡ ಠೇವಣಿ (ಐಎನ್‌ಆರ್)	ಇ-ಹರಾಜಿನ ದಿನಾಂಕ ಮತ್ತು ಸಮಯ	ಬಿಡ್ ಸಲ್ಲಿಸಲು ಕೊನೆಯ ದಿನಾಂಕ & ಸಮಯ ಮತ್ತು ಸ್ಥಳ
1	45479430003776	1) ಶ್ರೀ ಗಣೇಶ್ ಕುಮಾರ್ ಬಿ ಕೆ, ಹಾಗೂ ವಿಳಾಸ: ಮೆ॥ ಜೆ ಕೆ ಟ್ರೈರ್, 2) ಶ್ರೀ ಯೋಗೇಶ್ ಬಿ ಕೆ, 3) ಶ್ರೀಮತಿ ರಾಜಮ್ಮ, 4) ಶ್ರೀಮತಿ ಮಹಾದೇವಮ್ಮ	19.07.2024	25.09.2024	ರೂ.6,13,517/- (ರೂಪಾಯಿ ಆರು ಲಕ್ಷದ ಹದಿಮೂರು ಸಾವಿರದ ಐದು ನೂರ ಹದಿನೇಳು ಮಾತ್ರ)	09.04.2025 ರಂದು ಬೆಳಿಗ್ಗೆ 9:30 ರಿಂದ ಸಂಜೆ 05:00 ಗಂಟೆಯ ವರೆಗೆ	ರೂ. 10,34,000/- (ರೂಪಾಯಿ ಹತ್ತು ಲಕ್ಷದ ಮೂವತ್ತ ನಾಲ್ಕು ಸಾವಿರ ಮಾತ್ರ)	ರೂ.1,03,400/- (ರೂಪಾಯಿ ಒಂದು ಲಕ್ಷದ ಮೂರು ಸಾವಿರದ ನಾಲ್ಕು ನೂರ ಮಾತ್ರ)	23.04.2025 ಮಧ್ಯಾಹ್ನ 02.00 ಗಂಟೆಗೆ	ದಿನಾಂಕ : 22.04.2025 ರಂದು ಸಂಜೆ 5.00 ಗಂಟೆಯ ವರೆಗೆ ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್, ನೋಂದಾಯಿತ ಕಚೇರಿ: ದಿ ಫೇರ್‌ವೇ, ನೆಲ ಮತ್ತು ಮೊದಲ ಮಹಡಿ, ಸರ್ವೆ ನಂ.10/1, 11/2 & 12/2ಬಿ, ದೊಮ್ಮಲೂರು ಪಕ್ಕ, ಕೋರಮಂಗಲ ಇನ್ನರ್ ರಿಂಗ್ ರಸ್ತೆ, ಇಜಿಎಲ್ ಬಿಸಿನೆಸ್ ಪಾರ್ಕ್ ಪಕ್ಕ, ಚಲ್ಲಘಟ್ಟ, ಬೆಂಗಳೂರು-560071.

ಆಸ್ತಿಯ ವಿವರಣೆ: ಎಲ್ಲಾ ಭಾಗ ಮತ್ತು ವಿಭಾಗಗಳನ್ನು ಹೊಂದಿರುವ ಖಾತಾ ಸಂಖ್ಯೆ.211, ಇ ಖ್ಲಾಕ್ ಪಿಐಡಿ ಸಂಖ್ಯೆ.152100700700101489, ಗ್ರಾಮ ಮತ್ತು ಹೋಬಳಿ ದಕ್ಷಿಣ ಕರಾವಳಿ ಪಾಟ್ನಾ, ತಾಲ್ಲೂಕು ಮಂಡ್ಯ ಜಿಲ್ಲೆ, ವಿಸ್ತೀರ್ಣ : ಪೂರ್ವದಿಂದ ಪಶ್ಚಿಮಕ್ಕೆ: 7.62 ಮೀಟರ್ ಮತ್ತು ಉತ್ತರದಿಂದ ದಕ್ಷಿಣಕ್ಕೆ: 7.62 ಮೀಟರ್, ಮತ್ತು ಅದರ ಮೇಲೆ ಕಟ್ಟಡದೊಂದಿಗೆ. ಚಕ್ಕುಬಂದಿ:- ಪೂರ್ವಕ್ಕೆ: ರಸ್ತೆ, ಪಶ್ಚಿಮಕ್ಕೆ: ನಿವೇಶನ ಸಂಖ್ಯೆ.4, ಉತ್ತರಕ್ಕೆ: ಖಾಲಿ ಸ್ಥಳ, ದಕ್ಷಿಣಕ್ಕೆ: ರಸ್ತೆ.

ಸ್ವತ್ತುಗಳನ್ನು "ಎಲ್ಲಿ ಹೇಗಿದೆಯೋ ಹಾಗೆ" ಮತ್ತು "ಎಲ್ಲಿ ಏನಿದೆಯೋ ಹಾಗೆ" "ಆನ್ ಲೈನ್"ನಲ್ಲಿ ಇ-ಹರಾಜು ನಡೆಸಲಾಗುವುದು. ಬ್ಯಾಂಕಿನ ಅನುಮೋದಿತ ಸೇವಾದಾರರಾದ ಮೆ॥ 4 ಕ್ಲೋಸರ್‌ನ ವೆಬ್‌ಸೈಟ್ https://bankauctions.in & www.foreclosureindia.com ಪೋರ್ಟಲ್‌ನಲ್ಲಿ ಹರಾಜು ನಡೆಸಲಾಗುವುದು. ನಿರೀಕ್ಷಿತ ಬಿಡ್ದಾರರು ಸಂಪರ್ಕಿಸಬಹುದು, ಹೆಚ್ಚಿನ ಮಾಹಿತಿ ಮತ್ತು ವಿವರಗಳಿಗಾಗಿ ಸಹಾಯ, ವಿಧಾನ ಮತ್ತು ಇ-ಹರಾಜಿನ ಆನ್‌ಲೈನ್ ತರಬೇತಿಗಾಗಿ ಮೆ॥ 4 ಕ್ಲೋಸರ್, ಶ್ರೀ ಶ್ರೀನಿವಾಸುಲು, ಸಂಪರ್ಕ ಸಂಖ್ಯೆ: 8142000809. ಇಮೇಲ್ ಐಡಿ: info@bankauctions.in/ srinivas@bankauctions.in ಇವರನ್ನ ಸಂಪರ್ಕಿಸಬಹುದು.

ಇ-ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ನಿಯಮಗಳು ಮತ್ತು ಷರತ್ತುಗಳ ಕುರಿತು ಹೆಚ್ಚಿನ ವಿವರಗಳಿಗಾಗಿ ಮತ್ತು ಆಸ್ತಿಗೆ ಸಂಬಂಧಿಸಿದ ಯಾವುದೇ ಪ್ರಶ್ನೆಗೆ ದಯವಿಟ್ಟು ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಅಧಿಕೃತ ಅಧಿಕಾರಿಗಳು, ಶ್ರೀ ರಂಜನ್ ನಾಯಕ್ (ಮೊ.ಸಂ.9590858249), ಶ್ರೀ ಉಮೇಶ್ (ಮೊ.ಸಂ.8050149617) ಮತ್ತು ಶ್ರೀಮತಿ ಸಯೀದಾ (ಮೊ.ಸಂ.7400445147) ಅಧಿಕೃತ ಅಧಿಕಾರಿಯವರ ಉತ್ತಮ ತಿಳುವಳಿಕೆ ಮತ್ತು ಮಾಹಿತಿಗಾಗಿ ಇವರನ್ನ ಸಂಪರ್ಕಿಸಬಹುದು, ಆಸ್ತಿಗಳ ಮೇಲೆ ಯಾವುದೇ ಹೊರೆಗಳಿಲ್ಲ. ಆದಾಗ್ಯೂ ಉದ್ದೇಶಿತ ಬಿಡ್‌ದಾರರು ಹೊರೆಗಳಿಗೆ ಸಂಬಂಧಿಸಿದಂತೆ ತಮ್ಮದೇ ಆದ ವಿಚಾರಣೆಗಳನ್ನು ಮಾಡಬೇಕು. ತಮ್ಮ ಬಿಡ್ ಸಲ್ಲಿಸುವ ಮೊದಲು ಇರಿಸಲಾದ ಆಸ್ತಿಯ ಶೀರ್ಷಿಕೆ. ತಮ್ಮ ಬಿಡ್ ಸಲ್ಲಿಸುವ ಮೊದಲು ಆಸ್ತಿಯ ಶೀರ್ಷಿಕೆಯನ್ನು ಹೊಂದಿರಬೇಕು, ಯಾವುದೇ ಷರತ್ತುಬದ್ಧ ಬಿಡ್ ಅನ್ನು ಸ್ವೀಕರಿಸಲಾಗುವುದಿಲ್ಲ. ಅಡಮಾನದ ಆಸ್ತಿಗಳಿಗೆ ನಿಗದಿಪಡಿಸಲಾದ ಇ-ಹರಾಜಿನ ಕುರಿತು ಮೇಲೆ ತಿಳಿಸಲಾದ ಸಾಲಗಾರರು/ಜಾಮೀನುದಾರರು/ ಅಡಮಾನದಾರರಿಗೆ ಈ ಸೂಚನೆಯನ್ನು ನೀಡಲಾಗಿದೆ. ಸಾಲಗಾರರು /ಜಾಮೀನುದಾರರು / ಅಡಮಾನದಾರರಿಗೆ ಹರಾಜಿನ ದಿನಾಂಕದ ಮೊದಲು ಬಡ್ಡಿ ಮತ್ತು ಎಲ್ಲಾ ವೆಚ್ಚಗಳೊಂದಿಗೆ ಮೇಲೆ ತಿಳಿಸಿದಂತೆ ಮೊತ್ತವನ್ನು ಪಾವತಿಸಬೇಕು, ಒಂದು ವೇಳೆ ಉಳಿದಿರುವ ಬಾಕಿ ಮೊತ್ತ ಮತ್ತು ವೆಚ್ಚಗಳನ್ನು ಮರುಪಾವತಿಸಲು ವಿಫಲರಾದರೆ ಆಸ್ತಿಯನ್ನು ಮಾರಾಟ ಮಾಡಲಾಗುವುದು ಎಂದು ಈ ಸೂಚನೆ ಮೂಲಕ ನೀಡಲಾಗುತ್ತದೆ.

ದಿನಾಂಕ: 21.03.2025, ಸ್ಥಳ: ಮಂಡ್ಯ

ಸಹಿ/- ಅಧಿಕೃತ ಅಧಿಕಾರಿಗಳು, ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್

ಕುಡಿದ ಅಮಲಿನಲ್ಲಿ ಸ್ನೇಹಿತನ ಕತ್ತು ಕುಯ್ದು ಹತ್ಯೆ!

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಕುಡಿದ ಅಮಲಿನಲ್ಲಿ ಮಾತಿನ ಚಕಮಕಿ ನಡೆದು ಸ್ನೇಹಿತನ್ನೇ ಚಾಕುವಿನಿಂದ ಕತ್ತು ಕುಯ್ದು ಹತ್ಯೆ ಮಾಡಿರುವ ಘಟನೆ ತಾಲೂಕಿನ ಬೆಳಗೊಳ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಮೋಹನ್ ಕುಮಾರ್(44) ಹತ್ಯೆಯಾದ ವ್ಯಕ್ತಿ. ಅದೇ ಗ್ರಾಮದ ಪಕ್ಕದ ಮನೆಯ ಮೃತನ ಸ್ನೇಹಿತ ರವಿಚಂದ್ರ ಹತ್ಯೆ ಮಾಡಿರುವ ಆರೋಪಿ ಎಂದು ತಿಳಿದು ಬಂದಿದೆ.

ಈ ಇಬ್ಬರು ಸ್ನೇಹಿತರು ಮನೆಗಳಿಗೆ ಬಣ್ಣ ಬಳಿಯುವ ಕೆಲಸ ಮಾಡಿಕೊಂಡಿದ್ದರು. ಪ್ರತಿ ನಿತ್ಯ ಸಂಜೆ ಮೋಹನ್ ಕುಮಾರ್‌ಮನೆಯಲ್ಲಿ ಮದ್ಯ ಸೇವಿಸುತ್ತಿದ್ದರು ಎನ್ನಲಾಗಿದೆ. ಎಂದಿನಂತೆ ಬುಧವಾರ ತಡರಾತ್ರಿವರೆಗೂ ಮದ್ಯ ಸೇವಿಸಿ ಮತ್ತೇರಿಸಿಕೊಂಡ ಇಬ್ಬರು ಅವ್ಯಾಚಶಬ್ದಗಳಿಂದ ನಿಂದಿಸಿಕೊಂಡು, ಮಾತಿಗೆ ಮಾತು ಬೆಳೆದಿದೆ.

ಈ ವೇಳೆ ರವಿಚಂದ್ರ ಕೋಪಗೊಂಡು ಮನೆಯಲ್ಲಿ ಇಟ್ಟಿದ್ದ ಚಾಕು ತೆಗೆದುಕೊಂಡು ಮೋಹನ್ ಕುಮಾರ್‌ಕತ್ತು ಕೊಯ್ದಿದ್ದಾನೆ. ಅತಿಯಾದ ರಕ್ತ ಸೋರಿಕೆಯಾಗಿ ಸ್ಥಳದಲ್ಲೇ ಒದ್ದಾಡಿ ಮೋ ಹನ್ ಕುಮಾರ್‌ಮೃತನಾಗಿದ್ದಾನೆ.



ಮೋಹನ್ ಕುಮಾರ್

ನಂತರ ಅಕ್ಕ-ಪಕ್ಕದ ಮನೆಯವರಿಗೆ ವಿಷಯ ತಿಳಿದು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕಾಗಮಿಸಿದ ಕೆಆರ್‌ಎಸ್ ಪೊಲೀಸರು, ಘಟನಾ ಸ್ಥಳದಲ್ಲಿದ್ದ ಆರೋಪಿ ರವಿಚಂದ್ರನನ್ನು ಬಂಧಿಸಿ ಠಾಣೆಗೆ ಕರೆದೊಯ್ದಿದ್ದಾರೆ. ನಂತರ ಗುರುವಾರ ಬೆಳಗ್ಗೆ ಪೊಲೀಸರು ಶವವನ್ನು ಮೈಸೂರಿನ ಆಸ್ಪತ್ರೆ ಶವಗಾರ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ. ಸ್ಥಳಕ್ಕೆ ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಡಿವೈಎಸ್‌ಪಿ ಶಾಂತ ಮಲ್ಲಪ್ಪ, ಇನ್‌ಸ್ಪೆಕ್ಟರ್‌ಪುನೀತ್ ಇತರರು ಆಗಮಿಸಿ ಸ್ಥಳ ಪರಿಶೀಲನೆ ನಡೆಸಿ ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.